ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03

ಸಂಖ್ಯೆ:ಎ8/ಪ್ರ.ಪ.ಸು/ಮಾರ್ಚ್-23/30/2022-23 ದಿನಾಂಕ:07.06.2023

## :: ಸುತ್ತೋಲೆ ::

ವಿಷಯ: 2023ನೇ ಜೂನ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳ ವಿತರಣೆ ಕುರಿತು.

ಉಲ್ಲೇಖ: ಮಂಡಲಿ ಅಧಿಸೂಚನೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ.ಅಧಿಸೂಚನೆ/ಮಾರ್ಚ್-2023/14 /2022-23 ದಿನಾಂಕ:17.09.2022.

* * * * * * *

2023ನೇ ಜೂನ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ:07.06.2023 ರಂದು ಮಂಡಳಿಯ ಜಾಲತಾಣದ ಶಾಲಾಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು. ಒಂದು ವೇಳೆ ಏನಾದರೂ ವ್ಯತ್ಯಯಗಳು ಕಂಡು ಬಂದಲ್ಲಿ ಕೂಡಲೇ ಮಂಡಳಿಯ ಸಂಬಂಧಿಸಿದ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು.

ತಮ್ಮ ಶಾಲೆಯ ಮುಖಾಂತರ ನೋಂದಾಯಿಸಿದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ, ಡೌನ್‌ಲೋಡ್ ಮಾಡಿಕೊಂಡ **ಪ್ರವೇಶ ಪತ್ರಗಳ ಸಂಖ್ಯೆ ಸರಿ ಹೊಂದುತ್ತಿವೆಯೇ ಎಂದು** ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ಯಾವುದಾದರು ವಿದ್ಯಾರ್ಥಿಯ ಪ್ರವೇಶ ಪತ್ರ ಬಂದಿಲ್ಲದಿದ್ದರೆ, ಸದರಿ ವಿದ್ಯಾರ್ಥಿಯ ವಿವರವನ್ನು ಸಮರ್ಥನೆಯೊಂದಿಗೆ / ದಾಖಲೆಗಳೊಂದಿಗೆ ಮಂಡಳಿಗೆ ಕೂಡಲೇ ಕಳುಹಿಸಿಕೊಡುವುದು.

1. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಯಾದಿಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ವಿದ್ಯಾರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಳಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

2. ಶಾಲಾ ಲಾಗಿನ್‌ನಿಂದ ಮುದ್ರಿಸಿಕೊಂಡಿರುವ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಕೂಡಲೇ ವಿತರಿಸುವುದು ಹಾಗೂ ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸುವುದು.

3. ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪಾಸಾದ ವಿಷಯಕ್ಕೆ ಪರೀಕ್ಷೆ ಬರೆಯುವಂತೆ ಮುದ್ರಣವಾಗಿದ್ದಲ್ಲಿ, ಪಾಸಾದ ಬಗ್ಗೆ ಚುಕ್ಕೆ ಗುರುತಿಲ್ಲದ ಫಲಿತಾಂಶ ಪಟ್ಟಿಯನ್ನು ಮುಖ್ಯಶಿಕ್ಷಕರು ದೃಢೀಕರಿಸಿ ಪರೀಕ್ಷೆ ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಕಳುಹಿಸುವುದು.

4. NSR ಅಭ್ಯರ್ಥಿಗಳು ಈ ಮೊದಲು ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗುತ್ತಿದ್ದು, ಜೂನ್-2018ರ ಪೂರಕ ಪರೀಕ್ಷೆಯಿಂದ ಆಡಳಿತ ಹಾಗೂ ತಾಂತ್ರಿಕ ಕಾರಣಾಂತರಗಳಿಂದ ಜಿಲ್ಲಾ ಖಾಸಗಿ ಪರೀಕ್ಷಾ ಕೇಂದ್ರಗಳಿಗೆ ಸೇರ್ಪಡೆ ಮಾಡಲಾಗಿದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವುದು.

5. ಮಾರ್ಚ್/ಏಪ್ರಿಲ್ 2023ರ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀಕ್ಷೆಗೆ ನೋಂದಾಯಿಸಿಕೊಂಡು ಶೇಕಡಾ 75ರಷ್ಟು ಹಾಜರಾತಿ ಕೊರತೆಯಿಂದಾಗಿ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದ ಶಾಲಾ ವಿದ್ಯಾರ್ಥಿಗಳಿಗೆ ಜೂನ್-2023ರ ಪೂರಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಯಾಗಿ (CCEPF) ನೋಂದಾಯಿಸಿಕೊಳ್ಳಲು ಅವಕಾಶಕಲ್ಪಿಸಲಾಗಿದೆ. ಈ ಅಭ್ಯರ್ಥಿಗಳನ್ನು ಜಿಲ್ಲಾ ಖಾಸಗಿ ಪರೀಕ್ಷಾ ಕೇಂದ್ರಗಳಿಗೆ ಸೇರ್ಪಡೆ ಮಾಡಲಾಗಿದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವುದು.

6. ಪ್ರವೇಶ ಪತ್ರವನ್ನು ಪಡೆಯುವಲ್ಲಿ ಅಭ್ಯರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಕ್ರಮವಹಿಸುವುದು.

**ಜೂನ್ –2023ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯ ಅಂತಿಮ ಪ್ರವೇಶ ಪತ್ರಗಳಲ್ಲಿ ತಿದ್ದುಪಡಿಗಳಿದಲ್ಲಿ ಪ್ರಸ್ತಾವನೆಯನ್ನು ರವಾನಿಸಬೇಕಾದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಸಂಬಂಧಿಸಿದ ಜಿಲ್ಲೆಗಳ ಮಾಹಿತಿ.**

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ: ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಅಯೂಬ್ ಪಾಷಾ, ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ, ದಾವಣಗೆರೆ, ಕೋಲಾರ, ಚಿತ್ರದುರ್ಗ. | 9480021609 |
| 2 | ಜಿ | ಬಿ.ನರೇಂದ್ರಕುಮಾರ್, ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ, ರಾಮನಗರ, ತುಮಕೂರು, ಬೆಂಗಳೂರು ಗ್ರಾಮಾಂತರ, ಮಧುಗಿರಿ, ಶಿವಮೊಗ್ಗ. | 9900190492 |
| 3 | ಹೆಚ್ | ಭಾಗ್ಯವತಮ್ಮ.ಎಂ., ಸಹಾಯಕ ನಿರ್ದೇಶಕರು | ಚಾಮರಾಜನಗರ, ಮಂಡ್ಯ, ಮೈಸೂರು, ಉಡುಪಿ. | 9449812887 |
| 4 | ಐ | ಪುಟ್ಟತಾಯಮ್ಮ ಹಿರಿಯ ಸಹಾಯಕ ನಿರ್ದೇಶಕರು | ದಕ್ಷಿಣ ಕನ್ನಡ, ಹಾಸನ, ಚಿಕ್ಕಮಗಳೂರು, ಕೊಡಗು | 9986312959 |
| 5 | ಜೆ | ಜಯರಾಮುಡು, ಸಹಾಯಕ ನಿರ್ದೇಶಕರು | ಬೆಳಗಾವಿ, ಚಿಕ್ಕೋಡಿ, ವಿಜಯಪುರ, ಬಾಗಲಕೋಟೆ | 9449674952 |
| 6 | ಕೆ | ಗಾಯತ್ರಿದೇವಿ., ಹಿರಿಯ ಸಹಾಯಕ ನಿರ್ದೇಶಕರು | ಧಾರವಾಡ, ಶಿರಸಿ, ಉತ್ತರ ಕನ್ನಡ, ಹಾವೇರಿ, ಗದಗ | 9986090437 |
| 7 | ಎಲ್ | ಅನಂತಪದ್ಮನಾಭ. ಕೆ ಸಹಾಯಕ ನಿರ್ದೇಶಕರು | ಬಳ್ಳಾರಿ, ವಿಜಯನಗರ, ಕಲಬುರಗಿ, ಯಾದಗಿರಿ, ರಾಯಚೂರು, ಬೀದರ್, ಕೊಪ್ಪಳ | 9448937233 |

ಜೂನ್–2023ರ ಪೂರಕ ಪರೀಕ್ಷೆಯ ವೇಳಾಪಟ್ಟಿಯಂತೆ ಪರೀಕ್ಷೆಗೆ ಸಕಾಲದಲ್ಲಿ ಹಾಜರಾಗಲು ಸಂಬಂಧಿಸಿದ ಅಭ್ಯರ್ಥಿಗಳಿಗೆ/ಪೋಷಕರಿಗೆ ಮನವರಿಕೆ ಮಾಡಲು ಮುಖ್ಯಶಿಕ್ಷಕರಿಗೆ ತಿಳಿಸಿದೆ.

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
4. ಶಾಖಾಧಿಕಾರಿಗಳು, ಬಿ & ಸಿ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಸುತ್ತೋಲೆಯನ್ನು ಮಂಡಳಿಯ ಅಂತರ್‌ಜಾಲ & ಶಾಲಾಲಾಗಿನ್‌ನಲ್ಲಿ ಪ್ರಕಟಿಸುವುದು.
6. ಮಂಡಳಿಯ ಎಲ್ಲಾ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು :-**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಶಾಲಾ ಇಲಾಖೆ, ಕಲಬುರಗಿ ಮತ್ತು ಧಾರವಾಡ ವಿಭಾಗರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಅಧ್ಯಕ್ಷರು, ಕ.ಶಾ.ಪ.ಮೌ.ಮಂಡಲಿ ರವರ ಆಪ್ತ ಶಾಖೆಗೆ ಮಾಹಿತಿಗಾಗಿ.
4. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
5. ಕಛೇರಿ ಪ್ರತಿ.